## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬಾಗಲಕೋಟೆ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ–1)ಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ನಅಇ 371 ಬೆಮಪ್ರಾ 2015, ದಿನಾಂಕ 7.01.2016.
2. ಸದಸ್ಯ ಕಾರ್ಯದರ್ಶಿ, ಬಾಗಲಕೋಟೆ ಯೋಜನಾ ಪ್ರಾಧಿಕಾರ ರವರ ಪತ್ರ ಸಂಖ್ಯೆ: ನಯೋಪ್ರಾಬಾ/ ಮಹಾ ಯೋಜನೆ/ಅಂತಿಮ/ಬಾಗಲಕೋಟೆ/2015–16/327, ದಿನಾಂಕ 24–02–2018 ಮತ್ತು 06–06–2018.
3. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತ ಸಂ: DTCP-90-MISC-2016-17 ರಲ್ಲಿ ದಿನಾಂಕ 19.03.2018 ಮತ್ತು 26.06.2018ರ ಪತ್ರದಲ್ಲಿ ನೀಡಿರುವ ಅಭಿಪ್ರಾಯ

4977
15/11/18

******

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಬಾಗಲಕೋಟೆ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ(ಪ–1)ಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ದಿನಾಂಕ 24.02.2018ರ ಪತ್ರದಲ್ಲಿ ಸದಸ್ಯ ಕಾರ್ಯದರ್ಶಿ, ಬಾಗಲಕೋಟೆ ಯೋಜನಾ ಪ್ರಾಧಿಕಾರ ರವರು, ಬಾಗಲಕೋಟೆ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾಯೋಜನೆ(ಪ–I)ಯನ್ನು ಇದೇ ಕಾಯ್ದೆಯ ಕಲಂ 13(3) ರಡಿ ಸರ್ಕಾರದ ಅಂತಿಮ ಅನುಮೋದನೆ ಕೋರಲು ಪ್ರಸ್ತಾವನೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರಿಗೆ ಸಲ್ಲಿಸಿರುತ್ತಾರೆ ಹಾಗೂ ದಿನಾಂಕ 06.06.2018ರ ಪತ್ರದಲ್ಲಿ ಹಲವು ಅಂಶಗಳ ಬಗ್ಗೆ ಪುನರ್ ಪರಿಶೀಲಿಸಿ ಸ್ಪಷ್ಟೀಕರಣ ನೀಡಿರುತ್ತಾರೆ.

ಮೇಲೆ ಓದಲಾದ (3)ರ ಏಕ ಕಡತದ ದಿನಾಂಕ 19.03.2018 ರಲ್ಲಿ ಹಾಗೂ ದಿನಾಂಕ 26.06.2018ರ ಪತ್ರದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು, ಬಾಗಲಕೋಟೆ ಪಟ್ಟಣದ ಜನಸಂಖ್ಯೆಯು 2031ನೇ ಇಸವಿಗೆ 2,50,000 ಗಳಿಗೆ ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾಯೋಜನೆ(ಪ–1)ನ್ನು ರೂಪಿಸಲಾಗಿದ್ದು, ಬಾಗಲಕೋಟೆ ಪಟ್ಟಣದ ಜನಸಂಖ್ಯೆ, ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹಾಲಿ ಬೆಳವಣಿಗೆಯ ಗತಿ, ಹವಾಗುಣ, ರಸ್ತೆಗಳ ಹಾಲಿ ಪರಿಚಲನೆ ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ ಯೋಜನಾ ತತ್ವಗಳಿಗನುಗುಣವಾಗಿ ಹಾಗೂ ಮಹಾಯೋಜನೆಯ ತಯಾರಿಕೆ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಪ್ರಕರಣ (9) ರಿಂದ (12) ರವರೆಗೆ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ, ನಗರದ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ ಒಟ್ಟು 5404.09 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 2890.52 ಹೆಕ್ಟೇರ್ (ಶೇ.53.48), ವಾಣಿಜ್ಯಕ್ಕಾಗಿ 202.77 ಹೆಕ್ಟೇರ್ (ಶೇ.3.75), ಕೈಗಾರಿಕೆಗಾಗಿ 385.67 ಹೆಕ್ಟೇರ್ (ಶೇ.7.14), ಸಾರ್ವಜನಿಕ / ಅರೆ ಸಾರ್ವಜನಿಕ ಉಪಯೋಗಕ್ಕೆ 511.07 ಹೆಕ್ಟೇರ್ (ಶೇ.9.46), ಉದ್ಯಾನವನ ಮತ್ತು ಬಯಲು ಜಾಗಗಳಿಗೆ 476.15 ಹೆಕ್ಟೇರ್ (ಶೇ.8.81), ನಾಗರೀಕ ಸೌಲಭ್ಯಕ್ಕಾಗಿ 69.10 ಹೆಕ್ಟೇರ್ (ಶೇ.1.28), ಹಾಗೂ ಸಾರಿಗೆ ಮತ್ತು ಸಂಪರ್ಕ ವಲಯಕ್ಕೆ 868.81 ಹೆಕ್ಟೇರ್ (ಶೇ.16.08) ಪ್ರದೇಶವನ್ನು ನಿಗದಿಪಡಿಸಲಾಗಿದ್ದು,

...2/-

14/11/18

Kgm
14-11-18

ಮಹಾಯೋಜನೆ(ಪ-1)ಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 67 ಬೆಮಪ್ರಾ 2018, ಬೆಂಗಳೂರು, ದಿನಾಂಕ:09.11.2018**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬಾಗಲಕೋಟೆ ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಜನೆ(ಪ-1)ಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ.13(3)ರನ್ವಯ ಸರ್ಕಾರವು ಅಂತಿಮ ಅನುಮೋದನೆಯನ್ನು ನೀಡಿದೆ.

**ಷರತ್ತು:**

1) ಘನತ್ಯಾಜ್ಯ ವಸ್ತು ಸಂಗ್ರಹಣಾ ಘಟಕದ ಹಾಗೂ ಸುತ್ತಲಿನ ಅಭಿವೃದ್ಧಿ ಕುರಿತು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ನಿಯಮಾನುಸಾರ ಕ್ರಮ ಕೈಗೊಳ್ಳತಕ್ಕದ್ದು.
2) ಸ್ಥಳೀಯ ಯೋಜನಾ ವ್ಯಾಪ್ತಿಯಲ್ಲಿ ಒಳಗೊಂಡಿರುವ ನದಿ / ಕೆರೆ / ನಾಲಾ / ಕಾಲುವೆ / ಜಲಾಶಯದ ಹಿನ್ನೀರು ಇತ್ಯಾದಿ ಜಲಾವೃತ ಪ್ರದೇಶಗಳಿಗೆ ಸರ್ಕಾರವು ನೀಡುವ ನಿರ್ದೇಶನ / ಅಧಿಸೂಚನೆಯಂತೆ ಬಫರ್ ಅಳವಡಿಸತಕ್ಕದ್ದು.

ಮಹಾ ಯೋಜನೆ (ಪ- I)ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

**ಇವರಿಗೆ:**

ಸಂಕಲನಾಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ರವರು 100 ಪ್ರತಿಗಳನ್ನು ವಿಶೇಷ ರಾಜ್ಯ ಪತ್ರದಲ್ಲಿ ಮುದ್ರಿಸಿ, 50 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಹಾಗೂ 50 ಪ್ರತಿಗಳನ್ನು ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಗೆ ಕಳುಹಿಸುವಂತೆ ಕೋರಲಾಗಿದೆ.

**ಪ್ರತಿಯನ್ನು:**

1) ಜಿಲ್ಲಾಧಿಕಾರಿ, ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ.
2) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು
3) ಸದಸ್ಯ ಕಾರ್ಯದರ್ಶಿ, ಬಾಗಲಕೋಟೆ ಯೋಜನಾ ಪ್ರಾಧಿಕಾರ, ಬಾಗಲಕೋಟೆ. ಇವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
4) ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಾಗಲಕೋಟೆ.
5) ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.